# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಕ್ಷಿಣ ವಲಯ

**ಬೈರಸಂದ್ರ , ವಾರ್ಡ ಸಂಖ್ಯೆ: 169**

**ದಿನಾಂಕ:05.09.2022 ರಂದು ವಾರ್ಡ ಸಂಖ್ಯೆ 169 ಬೈರಸಂದ್ರ ವಾರ್ಡನಲ್ಲಿ ನಡೆದ ವಾರ್ಡ ಸಮಿತಿ ಸಭೆ:**

## –: ಸಮಿತಿ ಸಭೆಯ ನಡವಳಿಗಳು :–

ವಾರ್ಡ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಮತ್ತು ವಾರ್ಡ ಸಮಿತಿ ಸದಸ್ಯರು:–

| ಕ್ರ.ಸಂ | ಹೆಸರು | ಹುದ್ದೆ |
|---|---|---|
| 01 | ಶ್ರೀ ವಾಲು ರಾಥೋಡ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 02 | ಶ್ರೀ ಚಂದ್ರಶೇಖರ್ ವಿ | ಕಾರ್ಯದರ್ಶಿ ಮತ್ತು ಸಂಚಾಲಕರು |
| 03 | ಶ್ರೀಮತಿ ಪೊನಂ ಬಿ | ಹಿರಿಯ ಆರೋಗ್ಯ ನಿರೀಕ್ಷಕರು, ಬಿ.ಬಿ.ಎಂ.ಪಿ |
| 04 | ಶ್ರೀ ರಮೇಶ್ ವಿ ಬಿ | ಕಿರಿಯ ಆರೋಗ್ಯ ನಿರೀಕ್ಷಕರು, ಬಿ.ಬಿ.ಎಂ.ಪಿ |
| 05 | ಶ್ರೀ ನರೇಂದ್ರ ಬಾಬು | ಅರಣ್ಯ ಇಲಾಖೆ (ದಕ್ಷಿಣ) , ಬಿ.ಬಿ.ಎಂ.ಪಿ |
| 06 | ಕುಮಾರಿ ವೇದಾವತಿ ಎಂ | PHCO JNR UPHC |
| 07 | ಕುಮಾರಿ ಪ್ರೀತಿ ಯು.ಪಿ | PHCO JNR UPHC |
| 08 | ಶ್ರೀ ಬಸೀರ್ ಕಾನೊಮ್ | ವಾರ್ಡ ಮಾರ್ಷಲ್ |
| 09 | ಶ್ರೀಮತಿ ಮಂಜುಳ .ಕೆ.ಸಿ | ತೋಟಗಾರಿಕೆ ಇಲಾಖೆ, (ದಕ್ಷಿಣ), ಬಿ.ಬಿ.ಎಂ.ಪಿ ಜಯನಗರ |
| 10 | ಶ್ರೀಮತಿ ಶ್ರಿಜಾ . ಎಸ್ | ಸ.ಅ, BWSSB ಜಯನಗರ |
| 11 | ಶ್ರೀ ಮಲ್ಲೇಶ್ ಜಿ.ಎಮ್ | T.I ವಾರ್ಡ–169 |
| 12 | ವಾರ್ಡ 169 ರ ಸ್ಥಳಿಯ ನಿವಾಸಿಗಳ ಸಂಘ ಮತ್ತು ಸಾರ್ವಜನಿಕರು | |

ವಾರ್ಡ ಸಮಿತಿ ಅದ್ಯಕ್ಷರು ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಸ್ವಾಗತ ಕೋರುತ್ತಾ , ಸಭೆಯನ್ನು ಪ್ರಾರಂಭಿಸಿದರು.

1. ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ ದಿನಾಂಕ 22.08.2022 ರಂದು ಸಾರ್ವಜನಿಕರು ತಿಳಿಸಿದ ಸಮಸ್ಯೆಗಳ ಬಗ್ಗೆ ಹಾಗೂ ಅಧಿಕಾರಿಗಳು ತೆಗೆದುಕೊಂಡ ಕ್ರಮದ ಮಾಹಿತಿ ಪಡೆದುಕೊಂಡರು.
2. ಭಾರತ ಚುನಾವಣೆ ಆಯೋಗದ ನೀರ್ದೇಶನದಂತೆ ಪ್ರತಿ ವಾರ್ಡನ ವಾರ್ಡ ಸಮಿತಿ ಸಭೆಯಲ್ಲಿ ಹೊಸದಾಗಿ ಮತದಾರರ ಗುರುತಿನ ಚೀಟಿಯನ್ನು ನೀಡುವುದು, ತಿದ್ದುಪಡಿ ಮಾಡುವುದು, ಸ್ಥಳ ಬದಲಾವಣೆ ಅಥವಾ ವಿಧಾನಸಭಾ ಕ್ಷೇತ್ರ ಬದಲಾವಣೆ ಹಾಗೂ ಮತದಾರರ ಗುರುತಿನ ಚೀಟಿಗೆ ಆಧಾರ್ ಕಾರ್ಡ ಜೋಡಣೆ (Link) ಮಾಡುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
3. Ovter helpline app ಅಥವಾ www.nvsp.in (NATIONAL VOTERS SERVICE PORTAL - NVSP) ಮೂಲಕ ಸಾರ್ವಜನಿಕರು ಈ ಸೌಲಭ್ಯ ಪಡಿಯಬಹುದಾಗಿದೆ.
   i. ನಮೂನೆ (6) – ಹೊಸದಾಗಿ ಮತದಾರರ ಸೇರ್ಪಡೆ.
   ii. ನಮೂನೆ (7) – ಮತದಾರರ ಪಟ್ಟಿಯಿಂದ ತೆಗೆಯುವುದು.
   iii. ನಮೂನೆ (8) – ತಿದ್ದುಪಡಿ ಮಾಡುವುದು, ಸ್ಥಳ ಬದಲಾವಣೆ ಅಥವಾ ವಿಧಾನಸಭಾ ಕ್ಷೇತ್ರ ಬದಲಾವಣೆ.
   iv. ನಮೂನೆ 6(B) – ಮತದಾರರ ಗುರುತಿನ ಚೀಟಿಗೆ ಆಧಾರ್ ಕಾರ್ಡ ಜೋಡಣೆ (Link) ಮಾಡುವುದು.

Scanned with CamScanner

4. ವಾರ್ಡ್ ಸಂಖ್ಯೆ 169 ರಲ್ಲಿರುವ 10ನೇ ಅಡ್ಡರಸ್ತೆಯಲ್ಲಿ Shoulder drain ಮಾಡಿದ್ದು, ಆದರೆ Shoulder drain ಗಳಿಗೆ Steel Grating ಅಳವಡಿಸಿರುದಿಲ್ಲ ಮತ್ತು ಇನ್ನು ಅನೇಕ ಕಡೆ Shoulder drain ನಿರ್ಮಾಣ ಮಾಡುವಂತೆ ಹಾಗೂ ಹೆಚ್ಚಾನ ಮಳೆಯಿಂದಾಗಿ ರಸ್ತೆ ನೀರು LIC ಕಾಲೋನಿ ಒಳಗಡೆ ಬರುತ್ತಿದ್ದು ಇದರ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಕೋರಿದರು **(ಕ್ರಮ: ಸ.ಕಾ.ನಿ.ಅ, SWD (South), ಬಿ.ಬಿ.ಎಂ.ಪಿ)**

5. ವಾರ್ಡ್ ಸಂಖ್ಯೆ 169 ಯ ಬೈರಸಂದ್ರ ಪಾರ್ಕ್‌ನಲ್ಲಿ ಸ್ವಚ್ಚತೆ ಮತ್ತು ನಿರ್ವಹಣೆ ಕೊರತೆ ಕಾಣುತ್ತಿದ್ದು, ಸರಿಯಾದ ಕ್ರಮದಲ್ಲಿ ಕಾರ್ಯ ನಿರ್ವಹಿಸುತ್ತಿರುವುದಿಲ್ಲ ಹಾಗೂ ಸದರಿ ಪಾರ್ಕ್‌ನಲ್ಲಿ ವಿದ್ಯುತ್ ಸಂಪರ್ಕ, ಶೌಚಲಯ ನಿರ್ಮಾಣ ಹಾಗೂ ಪಾರ್ಕ ನಿರ್ವಹಣೆ ಮಾಡುವ ಸಿಂಬ್ಬದಿಗೆ ಕಟ್ಟಡವನ್ನು ನಿರ್ಮಾಣ ಮಾಡಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ ಯೋಜನೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**

6. ವಾರ್ಡ್ ಸಂಖ್ಯೆ 169 ಯ LIC ಕಾಲೋನಿಯ ಪಾರ್ಕನ ಸ್ವಚ್ಚತೆ ಮತ್ತು ನಿರ್ವಹಣೆ ಕೊರತೆ ಕಾಣುತ್ತಿದ್ದು ಇದರ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಕೋರಿದರು **(ಕ್ರಮ: ಸ.ಕಾ.ನಿ.ಅ ಯೋಜನೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**

7. ವಾರ್ಡ್ ಸಂಖ್ಯೆ 169 ರಲ್ಲಿರುವ 10ನೇ ಅಡ್ಡರಸ್ತೆಯಲ್ಲಿ Strom water drain (SWD) ಮೇಲೆ ವಾಹನಗಳನ್ನು ಪಾರ್ಕ ಮಾಡುತ್ತಿದ್ದು. ಇದರಿಂದ ಪಾದಚಾರಿ ಮಾರ್ಗದ ಮೇಲೆ ಸಾರ್ವಜನಿಕರು ಓಡಾಡಲು ತುಂಬಾ ತೊಂದರೆಯಾಗುತ್ತಿದ್ದು. ಇದರ ಬಗ್ಗೆ ಕ್ರಮ ವಹಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಮೈಕೊ ಲೇಔಟ್ ಸಂಚಾರ ಪೋಲಿಸ್ ಠಾಣೆ)**

8. LIC ಕಾಲೋನಿನಲ್ಲಿರುವ 3ನೇ ಅಡ್ಡರಸ್ತೆ ಮತ್ತು 5ನೇ ಅಡ್ಡರಸ್ತೆ ನಲ್ಲಿರುವ ಮರದ ಉದ್ದವಾಗಿರುವ ಕೊಂಬೆಗಳು ಬೀಳುವ ಸ್ಥಿತಿಯಲ್ಲಿದ್ದು. ಸದರಿ ರಸ್ತೆಗಳಲ್ಲಿರುವ ಮರದ ಕೊಂಬೆಗಳನ್ನು ಕತ್ತರಿಸುವಂತೆ ಸಭೆಯಲ್ಲಿ ಕೋರಿದರು. **(ಅರಣ್ಯ ಇಲಾಖೆ (ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**

9. ವಾರ್ಡ್ ಸಂಖ್ಯೆ 169 ರಲ್ಲಿರುವ ಅನೇಕ ಪಾರ್ಕ್‌ನಲ್ಲಿ ಸೊಳ್ಳೆಗಳು ತುಂಬಾ ಹೆಚ್ಚಾಗಿದ್ದು , ಪಾರ್ಕ್‌ಗಳಲ್ಲಿನ ಸೊಳ್ಳೆಗಳನ್ನು ನಿಯಂತ್ರಿಸಲು ಸೊಳ್ಳೆ ಔಷದಿಯನ್ನು ಸಿಂಪಡಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಆರೋಗ್ಯಾಧಿಕಾರಿಗಳು, ಬಿ.ಬಿ.ಎಂ.ಪಿ ಜಯನಗರ)**

10. ಬೈರಸಂದ್ರ ವಾರ್ಡ ಸಂಖ್ಯೆ-196(ಹೊಸದು) ರಲ್ಲಿನ ವಾರ್ಡ ವಿಂಗಡಣೆ (Delimitation) ಯಲ್ಲಿ ಮುಖ್ಯವಾಗಿ, LIC ಕಾಲೋನಿಯಲ್ಲಿರುವ ನಾಗರೀಕರಿಗೆ ತುಂಬಾ ಅನಾನುಕೂಲವಾಗುವಂತೆ ವಾರ್ಡ ವಿಂಗಡಣೆ ಮಾಡಿರುತ್ತಾರೆ. LIC ಕಾಲೋನಿಯನ್ನು ಎರಡು ಭಾಗವನ್ನಾಗಿ ವಿಂಗಡಣೆ ಮಾಡಿ, ತಿಲಕ್ ನಗರ ವಾರ್ಡಗೆ ಸೇರ್ಪಡೆ ಮಾಡಿರುವುದರಿಂದ ನಮ್ಮ ದಿನನಿತ್ಯ ಸಮಸ್ಯೆಗಳು ಮತ್ತು ವಾರ್ಡನ ಕುಂದು ಕೊರತೆಗಳನ್ನು ತಿಳಿಸಲು ಎರಡು ಕಡೆ ವಾರ್ಡ ಕಛೇರಿಗೆ ಹೋಗಲು ತುಂಬಾ ತೊಂದರೆಯಾಗುತ್ತದೆ ಮತ್ತು ವಾರ್ಡ ವಿಂಗಡಣೆ ಸಮಯದಲ್ಲಿ ಸಣ್ಣ ರಸ್ತೆಗಳಿಂದ ವಿಭಾಗ ಮಾಡಿದ್ದು ಇದರಿಂದ ಕಸದ ಸಮಸ್ಯೆ ಮತ್ತು ಇತರೆ ನಾಗರಿಕ ಸಮಸ್ಯೆಗಳನ್ನು ತಿಳಿಸಲು ತೊಂದರೆಯಾಗುತ್ತದೆ ಸಭೆಯಲ್ಲಿ ಕೋರಿರುತ್ತಾರೆ.

Scanned with CamScanner

11. ವಾರ್ಡ ಸಂಖ್ಯೆ 169 ರಲ್ಲಿರುವ ನಕ್ಕಲ್‌ಬಂಡೆಯ ಪ್ರದೇಶದಲ್ಲಿರುವ ಅಡ್ಡರಸ್ತೆ ಮತ್ತು ಮುಖ್ಯರಸ್ತೆಯ ಅನೇಕ ಮ್ಯಾನ್‌ಹೋಲ್ (Manhole) ಗಳಲ್ಲಿ ಹೊಳು ತುಂಬಿಕೊಂಡಿದ್ದು, ಮ್ಯಾನ್‌ಹೋಲ್‌ಗಳಲ್ಲಿರುವ ಹೂಳುನ್ನು ತೆಗೆಯಲು ಹಾಗೂ ಮಳೆಯ ನೀರುನ್ನು ಒಳಚರಂಡಿ ಬಿಡುತ್ತಿದ್ದು ಇದರ ಬಗ್ಗೆ ಕ್ರಮ ವಹಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, BWSSB, ಜಯನಗರ)**

12. ವಾರ್ಡ ಸಂಖ್ಯೆ 169 ರಲ್ಲಿರುವ ನಕ್ಕಲ್‌ಬಂಡೆಯ ಪ್ರದೇಶದಲ್ಲಿರುವ ಮುನೇಶ್ವರ ದೇವಸ್ಥಾನದ ಹತ್ತಿರ ಸೊಳ್ಳೆಗಳು ತುಂಬಾ ಹೆಚ್ಚಾಗಿದ್ದು, ದೇವಸ್ಥಾನದ ಹತ್ತಿರ ಸೊಳ್ಳೆಗಳನ್ನು ನಿಯಂತ್ರಿಸಲು ಸೊಳ್ಳೆ ಔಷದಿಯನ್ನು ಸಿಂಪಡಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಆರೋಗ್ಯಾಧಿಕಾರಿಗಳು, ಬಿ.ಬಿ.ಎಂ.ಪಿ ಜಯನಗರ)**

13. ವಾರ್ಡ ಸಂಖ್ಯೆ 169 ರಲ್ಲಿರುವ ನಕ್ಕಲ್‌ಬಂಡೆಯ ಪ್ರದೇಶದಲ್ಲಿರುವ ಅನೇಕ ಕಡೆ ಬೀದಿ ದೀಪ ಇರುವುದಿಲ್ಲ. ಇದರಿಂದ ಸಾರ್ವಜನಿಕರು ಓಡಡಲು ತುಂಬಾ ತೊಂದರೆಯಾಗುತ್ತಿದ್ದು. ಬೇಗನೆ ಸದರಿ ಪ್ರದೇಶದಲ್ಲಿ ಬೀದಿ ದೀಪಗಳನ್ನು ಅಳವಡಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ, ವಿದ್ಯುತ್(ದಕ್ಷಿಣ) ಬಿ.ಬಿ.ಎಂ.ಪಿ ಜಯನಗರ)**

14. 10ನೇ ಅಡ್ಡರಸ್ತೆಯಲ್ಲಿರುವ ಗಣೇಶ ದೇವಸ್ಥಾನ ಹಿಂದಗಡೆಯಲ್ಲಿರುವ ಖಾಲಿ ಜಾಗದಲ್ಲಿ ಕಸ ಸಂಗ್ರಹಣೆ ವಾಹನಗಳನ್ನು ನಿಲ್ಲಿಸಲು ಅವಕಾಶವಿದ್ದು ಇದರ ಬಗ್ಗೆ ಕ್ರಮವಹಿಸಲು ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ ಜಯನಗರ ವಿಭಾಗ, SWM)**

15. ವಾರ್ಡ ಸಂಖ್ಯೆ 169 ರಲ್ಲಿರುವ ಅನೇಕ ರಸ್ತೆಗಳಿಗೆ ಡಾಂಬರೀಕರಣವಾಗಿದ್ದು. ಇದರಿಂದ ರಸ್ತೆಯಲ್ಲಿರುವ ಮ್ಯಾನ್‌ಹೂಲ್‌ಗಳ ಮಟ್ಟವು ರಸ್ತೆ ಮಟ್ಟಕ್ಕಿಂತ ಕಡಿಮೆ ಇದ್ದು. ಇದರಿಂದ ವಾಹನ ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿದ್ದು ಕೂಡಲೇ ಸಂಬಂಧ ಪಟ್ಟ ಇಲಾಖೆಯವರು ಮ್ಯಾನ್‌ಹೂಲ್‌ಗಳ ಮಟ್ಟವನ್ನು ರಸ್ತೆ ಮಟ್ಟಕ್ಕೆ ಸರಿ ಸಮವಾಗಿ ಸರಿಪಡಿಸುವಂತೆ ಸಭೆಯಲ್ಲಿ ಕೋರಿದರು. **(ಕ್ರಮ: ಸ.ಕಾ.ನಿ.ಅ ಜಯನಗರ ಉಪ–ವಿಭಾಗ, BWSSB)**

**ನಿರ್ಣಯ:** ಕೊನೆಯದಾಗಿ ಸದಸ್ಯ ಕಾರ್ಯದರ್ಶಿಗಳು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಯನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ವರದಿ ಮಾಹಿತಿಯನ್ನು ಒದಗಿಸಬೇಕೆಂದು ಕಾರ್ಯದರ್ಶಿ ಮತ್ತು ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಚಂದ್ರಶೇಖರ್.ವಿ)
ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಮಿತಿ ಸಭೆ
ವಾರ್ಡ–169, ಬೈರಸಂದ್ರ

1. ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಯವರಿಗೆ ಕಳುಹಿಸಿದೆ.
2. ಮಾನ್ಯ ವಲಯ ಆಯುಕ್ತರು (ದಕ್ಷಿಣ), ಬಿ.ಬಿ.ಎಂ.ಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
4. ಕಛೇರಿ ಕಡತಕ್ಕೆ.

Scanned with CamScanner